**ದಿಃ30.10.2025 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಧ್ಯಂತರ ಅರ್ಜಿ ಸಂಖ್ಯೆ 1 ರ ಬಾಬ್ತು. ಅರ್ಜಿದಾರರ ಪರ ಶ್ರೀ.ಎ.ಜಿ.ಜಿ ವಕೀಲರಿಂದ ಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು, ಅದರಲ್ಲಿ ಪ್ರಸ್ತಾಪಿಸಿರುವ ವಿಚಾರಗಳನ್ನು ನಾನೇ ಮಾಹಿತಿ ಕೊಟ್ಟು ಬರೆಸಿರುತ್ತೇನೆ ಮತ್ತು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದ ಒಕ್ಕಣೆಯನ್ನು ಓದಿಸಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಸಂಗತಿಗಳು ಸತ್ಯದಿಂದ ಕೂಡಿದೆ ಎಂದು ಮತ್ತು ಅದರಲ್ಲಿ ಇರುವ ಸಹಿ ನನ್ನದಾಗಿರುತ್ತದೆ.

ಆದ್ದರಿಂದ ನಾನು ಮಧ್ಯಂತರ ಅರ್ಜಿ ಸಂಖ್ಯೆ 1 ರಲ್ಲಿ ಕೋರಿದಂತೆ ಆದೇಶ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ 3ನೇ ಎದುರುದಾರರ ಪರ ಶ್ರೀ.ಕೆ.ಡಿ.ಡಿ ವಕೀಲರಿಂದ ಃ**

ಯಾವ ದಿನಾಂಕದಂದು ಅಪಘಾತ ಸಂಭವಿಸಿದೆ ಎಂದರೆ ಸಾಕ್ಷಿ 2024 ರ ಸೆಪ್ಟೆಂಬರ್ ತಿಂಗಳಲ್ಲಿ ಸಂಭವಿಸಿದೆ ಎನ್ನುತ್ತಾರೆ. ನಾನು ಮಂಗಳೂರಿನ ಯುನಿಟಿ ಆಸ್ಪತ್ರೆಯಲ್ಲಿ 1 ತಿಂಗಳ ಕಾಲ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದೇನೆ. ಸಾಕ್ಷಿ ಮುಂದುವರೆದು ಯುನಿಟಿ ಆಸ್ಪತ್ರೆಯಿಂದ ಬಿಡುಗಡೆ ಆದ ನಂತರ ಸುಳ್ಯದಲ್ಲಿ

ಫಿಜೀಯೋಥೆರೆಪಿಗೆ ಒಂದರಿಂದ ಒಂದುವರೆ ತಿಂಗಳ ಕಾಲ ಒಳಪಟ್ಟಿರುತ್ತೇನೆ ಎನ್ನುತ್ತಾರೆ. ಆಸ್ಪತ್ರೆಯಿಂದ ಕೊನೆಯದಾಗಿ ಯಾವಾಗ ಬಿಡುಗಡೆ ಆಗಿದ್ದೆ ಎಂದರೆ ಸಾಕ್ಷಿ ಈಗ ನೆನಪಿಲ್ಲ ಎನ್ನುತ್ತಾರೆ. ನ್ಯಾಯಾಲಯದ ಮುಂದೆ ಬಿಡುಗಡೆ ಸಾರಾಂಶ ಮತ್ತು ಮೆಡಿಕಲ್ ಬಿಲ್ಲುಗಳನ್ನು ಹಾಜರು ಮಾಡಿದ್ದೀರಾ ಎಂದರೆ ಸಾಕ್ಷಿ ನೆನಪಿಲ್ಲ ಎನ್ನುತ್ತಾರೆ. ಚಿಕಿತ್ಸೆಗೆ ಒಳಗಾದ ನಂತರ ಸಾವಕಾಶವಾಗಿ ಓಡಾಡುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ವಿಶ್ರಾಂತಿಯಲ್ಲಿ ಇದ್ದೇನೆ ಎನ್ನುತ್ತಾರೆ. ನನ್ನನ್ನು ಆಸ್ಪತ್ರೆಯಲ್ಲಿ ಪೋಷಕರು ನೋಡಿಕೊಂಡಿದ್ದಾರೆ. ಸದರಿಯವರಿಗೆ ವಕೀಲರನ್ನು ಭೇಟಿ ಮಾಡಿ ಪರಿಹಾರ ಅರ್ಜಿ ಸಲ್ಲಿಸಲು ಯಾವುದೇ ತೊಂದರೆ ಇತ್ತಾ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎನ್ನುತ್ತಾರೆ.ಅಪಘಾತದಲ್ಲಿ ನನ್ನ ತಲೆಗೆ ಯಾವುದೇ ಗಾಯ ಆಗಿರಲಿಲ್ಲ ಎಂದರೆ ಸರಿಯಲ್ಲ. ನನಗೆ ಯಾವುದೇ ತೊಂದರೆ ಇಲ್ಲದೆ ಇದ್ದರು ಉದ್ದೇಶ ಪೂರ್ವಕಾಗಿ ವಿಳಂಬವಾಗಿ ಈ ಅರ್ಜಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಈ ಅರ್ಜಿ ಸಲ್ಲಿಸಲು ಸಂಭವಿಸಿರುವ ವಿಳಂಬಕ್ಕೆ ಕೊಟ್ಟಿರುವ ಕಾರಣ ಸಕಾರಣವಲ್ಲ ಎಂದರೆ ಸರಿಯಲ್ಲ. ಮಧ್ಯಂತರ ಅರ್ಜಿ ಸಂಖ್ಯೆ 1 ಕಾನೂನಿನ ಅಡಿ ಉರ್ಜಿತ ಅಲ್ಲ ಎಂದರೆ ಸರಿಯಲ್ಲ. ನಾನು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 1 ಮತ್ತು 2ನೇ ಎದುರುದಾರರ ಪರ ಶ್ರೀ.ಬಿ.ಎಂ.ಎಸ್ ವಕೀಲರಿಂದ ಃ**

3 ನೇ ಎದುರುದಾರರ ಪರ ವಕೀಲರು ಮಾಡಲಾದ ಪಾಟಿ ಸವಾಲನ್ನು 1 ಮತ್ತು 2ನೇ ಎದುರುದಾರರ ಪರ ವಕೀಲರು ಅಳವಡಿಸಿಕೊಂಡಿರುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/-

(ಸಿ. ವೀರಭದ್ರಯ್ಯ)
ಹಿರಿಯ ಸಿವಿಲ್ ನ್ಯಾಯಾಧೀಶರು,
ಕೊಡಗು, ಮಡಿಕೇರಿ.